

ಬಾಲಿವುಡ್ ನಟಿ ದಿಶಾ ಪಟಾನಿ ಈಗ ಹಾಲಿವುಡ್‌ನಲ್ಲೂ ತಮ್ಮ ಅದೃಷ್ಟ ಪರೀಕ್ಷೆಗೆ ಸಜ್ಜಾಗಿದ್ದಾರೆ. ಪ್ರಿಯಾಂಕಾ ಚೋಪ್ರಾ, ದೀಪಿಕಾ ಪಡುಕೋಣೆ ಮತ್ತು ಟಬು ಅವರ ಬಳಿಕ, ದಿಶಾ ಕೂಡ ಹಾಲಿವುಡ್ ಸಿನಿಮಾ ಮೂಲಕ ಅಂತರರಾಷ್ಟ್ರೀಯ ಸಿನಿ ವೇದಿಕೆಗೆ ಕಾಲಿಡುತ್ತಿದ್ದಾರೆ. ದಿಶಾ ಪಟಾನಿ, ಆಸ್ಕರ್ ಪ್ರಶಸ್ತಿ ವಿಜೇತ ನಟ ಕೆವಿನ್ ಸ್ಪೇಸಿ ನಿರ್ದೇಶನದ ಸಿನಿಮಾದಲ್ಲಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಕೆಪಿಎಸ್‌ಸಿ ಅಧ್ಯಕ್ಷರಿಗೆ ಗೇಟ್‌ಪಾಸ್

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಧ್ಯಕ್ಷ ಶಿವಶಂಕರಪ್ಪ ಎಸ್. ಸಾಹುಕಾರ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಆದೇಶ ಹೊರಡಿಸಿದ್ದಾರೆ. ತಮ್ಮ ಇಬ್ಬರು ಪುತ್ರಿಯರು ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಗೆ ನೇಮಕವಾಗಲು ಅಧಿಕಾರ ದುರುಪಯೋಗಪಡಿಸಿಕೊಂಡಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಶಿವಶಂಕರಪ್ಪ ಸಾಹುಕಾರ ವಿರುದ್ಧದ ಆರೋಪಗಳ ಕುರಿತು ತನಿಖೆ ನಡೆಸುವಂತೆ ಶಿಫಾರಸು ಮಾಡಿರುವ ರಾಜ್ಯಪಾಲರು, ಈ ವಿಷಯವನ್ನು ಸುಪ್ರೀಂ ಕೋರ್ಟ್‌ಗೆ ಉಲ್ಲೇಖಿಸಲು ರಾಷ್ಟ್ರಪತಿಗಳಿಗೆ ಶಿಫಾರಸು ಮಾಡಿದ್ದಾರೆ. ಮುಂದಿನ ಆದೇಶದವರೆಗೆ ಕೆಪಿಎಸ್‌ಸಿಯ ಹಿರಿಯ ಸದಸ್ಯರು ಹಂಗಾಮಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ 50 ಕೈಗಾರಿಕಾ ವಿಸ್ತರಣಾಧಿಕಾರಿ ಹುದ್ದೆಗಳ ನೇಮಕಾತಿಗೆ 2024ರ ಮಾರ್ಚ್ 15ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಈ ಹುದ್ದೆಗಳಿಗೆ ಶಿವಶಂಕರಪ್ಪ ಸಾಹುಕಾರ ಅವರ ಪುತ್ರಿ ಸುಮಾ ಎಸ್. ಸಾಹುಕಾರ ಅವರು 3ಬಿ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸಿದ್ದರು. 1:3 ಅನುಪಾತದ ಅರ್ಹತಾ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದ ಅವರು ಫೆಬ್ರವರಿ 19ರಂದು ದಾಖಲೆಗಳ ಪರಿಶೀಲನೆಗೆ ಹಾಜರಾಗಿದ್ದರು.

ದಾಖಲೆಗಳ ಪರಿಶೀಲನೆ ವೇಳೆ, ಅವರು ಸಲ್ಲಿಸಿದ್ದ 2020ರ ಮಾರ್ಚ್ 4ರ ದಿನಾಂಕದ ಜಾತಿ ಮತ್ತು ಆದಾಯ ಪ್ರಮಾಣಪತ್ರದಲ್ಲಿ ಕುಟುಂಬದ ವಾರ್ಷಿಕ ಆದಾಯ ಕೇವಲ ರೂ.40 ಸಾವಿರ ಎಂದು ನಮೂದಿಸಲಾಗಿತ್ತು. ಆದರೆ ಶಿವಶಂಕರಪ್ಪ ಸಾಹುಕಾರ ಅವರು 2019ರಿಂದಲೇ ಕೆಪಿಎಸ್‌ಸಿ ಸದಸ್ಯರಾಗಿದ್ದು, ಆಯೋಗದಿಂದ ವೇತನ ಪಡೆಯುತ್ತಿರುವ ಹಿನ್ನೆಲೆಯಲ್ಲಿ ಕುಟುಂಬದ ವಾರ್ಷಿಕ ಆದಾಯ ರೂ.40 ಸಾವಿರ ಎಂದು ತೋರಿಸಿರುವುದು ಮೇಲ್ನೋಟಕ್ಕೆ ಸುಳ್ಳು ಮಾಹಿತಿ ಎಂದು ಅಧಿಕಾರಿಗಳು ಗುರುತಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕೆಪಿಎಸ್‌ಸಿಯ ಸಮಗ್ರತೆ ಹಾಗೂ ವಿಶ್ವಾಸಾರ್ಹತೆಯನ್ನು ಕಾಪಾಡುವುದು ಮತ್ತು ನ್ಯಾಯಯುತ, ನಿಷ್ಪಕ್ಷಪಾತ ಹಾಗೂ ಪ್ರಭಾವರಹಿತ ತನಿಖೆ ನಡೆಯುವುದನ್ನು ಖಚಿತಪಡಿಸುವ ಉದ್ದೇಶದಿಂದ ರಾಷ್ಟ್ರಪತಿಗಳ ಮುಂದಿನ ಆದೇಶದವರೆಗೆ ಶಿವಶಂಕರಪ್ಪ ಸಾಹುಕಾರ ಅವರನ್ನು ಅಧ್ಯಕ್ಷ ಸ್ಥಾನದಿಂದ ಅಮಾನತುಗೊಳಿಸಲಾಗಿದೆ ಎಂದು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜೊತೆಗೆ, ಮುಂದಿನ ಆದೇಶದವರೆಗೆ ಆಯೋಗದ ಹಿರಿಯ ಸದಸ್ಯರು ಹಂಗಾಮಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದಾರೆ.

## ನವದಾಂಪತ್ಯ ದುರಂತ ಅಂತ್ಯ

ತುಮಕೂರು: ಪತ್ನಿ ಆತ್ಮಹತ್ಯೆ ಮಾಡಿಕೊಂಡಿರುವುದನ್ನು ಕಂಡು ಮನನೊಂದ ಪತಿಯೂ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಹೃದಯವಿದ್ರಾವಕ ಘಟನೆ ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಹನುಮನಹಳ್ಳಿಯಲ್ಲಿ ನಡೆದಿದೆ.

ಆತ್ಮಹತ್ಯೆ ಮಾಡಿಕೊಂಡ ದಂಪತಿಯನ್ನು ಶರಣ್ಯ (20) ಹಾಗೂ ಗಿರೀಶ್ (28) ಎಂದು ಗುರುತಿಸಲಾಗಿದೆ. ನಾಲ್ಕು ತಿಂಗಳ ಹಿಂದಷ್ಟೇ ಇವರ ವಿವಾಹವಾಗಿದ್ದು, ನವದಾಂಪತ್ಯದ ಜೀವನ ದುರಂತ ಅಂತ್ಯ ಕಂಡಿದೆ.

ಮನೆಯಲ್ಲಿದ್ದ ವೇಳೆ ಶರಣ್ಯ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಪತ್ನಿ ಮೃತದೇಹವನ್ನು ಕಂಡ ಗಿರೀಶ್ ತೀವ್ರ ಆಘಾತಕ್ಕೊಳಗಾಗಿ, ಬಳಿಕ ಮನೆಯ ಸಮೀಪದ ಹೊಲದಲ್ಲಿದ್ದ ಮರಕ್ಕೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಸೋಮವಾರ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಾರ್ವಜನಿಕರ ಅಹವಾಲು ಆಲಿಸಿದರು..

## ದೇವಾಲಯಗಳಿಗೆ ಪ್ರತ್ಯೇಕ ಮಾರ್ಗಸೂಚಿ ಪ್ರಕಟ

ಬೆಂಗಳೂರು: ಅಯೋಧ್ಯೆ ರಾಮ ಮಂದಿರದ ಹುಂಡಿ ಕಳ್ಳತನ ಪ್ರಕರಣದ ಬೆನ್ನಲ್ಲೇ ರಾಜ್ಯ ಸರ್ಕಾರ ಮುಜರಾಯಿ ಇಲಾಖೆಯ ವ್ಯಾಪ್ತಿಯ ದೇವಾಲಯಗಳ ಹುಂಡಿ ಹಣ ಮತ್ತು ದೇಣಿಗೆಗಳ ಸುರಕ್ಷತೆಗೆ ಮಹತ್ವದ ಕ್ರಮ ಕೈಗೊಂಡಿದೆ.

ದೇವಾಲಯಗಳಲ್ಲಿ ಭದ್ರತೆ ಹಾಗೂ ಪಾರದರ್ಶಕತೆಯನ್ನು ಹೆಚ್ಚಿಸುವ ಉದ್ದೇಶದಿಂದ ಧಾರ್ಮಿಕ ದತ್ತಿ ಇಲಾಖೆ ಸಮಗ್ರ ಕಾರ್ಯವಿಧಾನ (ಎಸ್‌ಒಪಿ) ಜಾರಿಗೆ ತಂದಿದ್ದು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಕಂದಾಯ ಅಧಿಕಾರಿಗಳು, ಮುಜರಾಯಿ ಅಧಿಕಾರಿಗಳು ಹಾಗೂ ದೇವಾಲಯ ಆಡಳಿತ ಮಂಡಳಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ದೇವಾಲಯಗಳ ಹುಂಡಿಗಳಲ್ಲಿ ಕಳ್ಳತನ, ಹಣದ ದುರುಪಯೋಗ ಮತ್ತು ಭದ್ರತಾ ಲೋಪಗಳ ಬಗ್ಗೆ ವಿವಿಧ ರಾಜ್ಯಗಳಲ್ಲಿ ವರದಿಯಾಗುತ್ತಿರುವ ಘಟನೆಗಳನ್ನು ಗಮನದಲ್ಲಿಟ್ಟುಕೊಂಡು ಈ ಕ್ರಮ ಕೈಗೊಳ್ಳಲಾಗಿದೆ.

ಹೊಸ ಮಾರ್ಗಸೂಚಿಯ ಪ್ರಕಾರ ದೇವಾಲಯಗಳಲ್ಲಿ ಅಳವಡಿಸಲಾಗುವ ಹುಂಡಿಗಳು ಸಾರ್ವಜನಿಕರಿಗೆ ಸ್ಪಷ್ಟವಾಗಿ ಕಾಣುವ ಸ್ಥಳದಲ್ಲಿರಬೇಕು ಹಾಗೂ ನಾಲ್ಕು ದಿಕ್ಕುಗಳಿಂದ ನಿಗಾ ವಹಿಸಲು ಸಿಸಿಟಿವಿ ವೆಬ್ ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸಬೇಕು. ಈ ಕ್ಯಾಮರಾಗಳ ದೃಶ್ಯಗಳನ್ನು ಸರ್ವರ್‌ನಲ್ಲಿ ಸಂಗ್ರಹಿಸುವುದರ ಜೊತೆಗೆ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ ಕಚೇರಿಗಳ ಮುಜರಾಯಿ ವಿಭಾಗ ಮತ್ತು ಧಾರ್ಮಿಕ ದತ್ತಿ ಇಲಾಖೆಯ ಕೇಂದ್ರ ಕಚೇರಿಯಿಂದ ಮೇಲ್ವಿಚಾರಣೆ ನಡೆಸಲಾಗುತ್ತದೆ.

ದೇವಾಲಯಗಳ ಸಿಸಿಟಿವಿ ವ್ಯವಸ್ಥೆಯನ್ನು ಸ್ಥಳೀಯ ಪೊಲೀಸ್ ಠಾಣೆಗಳು ಮತ್ತು ಪೊಲೀಸ್ ನಿಯಂತ್ರಣ ಕೊಠಡಿಗಳೊಂದಿಗೆ ಸಂಪರ್ಕಗೊಳಿಸಿ ನೈಜ ಸಮಯದ ನಿಗಾವ್ಯವಸ್ಥೆ ಕಲ್ಪಿಸಲು ಸೂಚಿಸಲಾಗಿದೆ.

ಭಕ್ತರು ನಗದು ದೇಣಿಗೆಯ ಬದಲಿಗೆ ಡಿಜಿಟಲ್ ಪಾವತಿಗೆ ಉತ್ತೇಜನ ನೀಡುವ ಸಲುವಾಗಿ ದೇವಾಲಯಗಳಲ್ಲಿ ಕ್ಯೂಆರ್ ಕೋಡ್, ಯುಪಿಐ, ಭೀಮ್ ಸೇರಿದಂತೆ ವಿವಿಧ ಡಿಜಿಟಲ್ ಪಾವತಿ ವ್ಯವಸ್ಥೆಗಳನ್ನು ಅಳವಡಿಸಲು ಆದೇಶಿಸಲಾಗಿದೆ.

## ರೈತರ ಪ್ರತಿಭಟನೆ ಮತ್ತಷ್ಟು ತೀವ್ರ ಸ್ವರೂಪ

ಬಿಡದಿ: ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ಜಮೀನು ಸ್ವಾಧೀನ ಪ್ರಕ್ರಿಯೆಯನ್ನು ವಿರೋಧಿಸುತ್ತಿರುವ ರೈತರ ಪ್ರತಿಭಟನೆ ಮತ್ತಷ್ಟು ತೀವ್ರ ಸ್ವರೂಪ ಪಡೆದುಕೊಂಡಿದೆ.

ಸರ್ಕಾರದ ಜಮೀನು ಸ್ವಾಧೀನ ನಿರ್ಧಾರವನ್ನು ಖಂಡಿಸಿ ಹಲವು ದಿನಗಳಿಂದ ಹೋರಾಟ ನಡೆಸುತ್ತಿರುವ ರೈತರು, ಸೋಮವಾರ ಮಂಡಲಹಳ್ಳಿ ಗ್ರಾಮದಲ್ಲಿ ಜೆಎಂಸಿ (ಜಂಟಿ ಮಾಪನ) ಸರ್ವೆಗೆ ಬಂದ ಅಧಿಕಾರಿಗಳನ್ನು ತಡೆದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಕೆಲ ಮಹಿಳಾ ರೈತರು ಅಧಿಕಾರಿಗಳಿಗೆ ಪೊರಕೆಯಿಂದ ಹೊಡೆದರೆ, ಪ್ರತಿಭಟನಾಕಾರರು ಅಧಿಕಾರಿಗಳ ವಾಹನವನ್ನು ಸುತ್ತುವರಿದು ಕಲ್ಲು ತೂರಾಟ ನಡೆಸಿದ ಪರಿಣಾಮ ಕೆಲಕಾಲ ಪರಿಸ್ಥಿತಿ ಉದ್ವಿಗ್ನಗೊಂಡಿತು.

ಬಿಡದಿ ತಾಲೂಕಿನ ಮಂಡಲಹಳ್ಳಿ ಗ್ರಾಮದಲ್ಲಿ ಜಮೀನು ಸರ್ವೆ ನಡೆಸದಂತೆ ರೈತರು ಈ ಹಿಂದೆಯೇ ಎಚ್ಚರಿಕೆ ನೀಡಿದ್ದರು. ಸ್ಥಳೀಯರ ತೀವ್ರ ವಿರೋಧದ ನಡುವೆಯೂ ಜಿಬಿಡಿಎ (ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) ಅಧಿಕಾರಿಗಳು ಪೊಲೀಸ್ ಭದ್ರತೆಯೊಂದಿಗೆ ಜೆಎಂಸಿ ಸರ್ವೆಗೆ ಮುಂದಾದರು. ಇದರಿಂದ ಸ್ಥಳದಲ್ಲಿದ್ದ ರೈತರು ಮತ್ತು ಅಧಿಕಾರಿಗಳ ನಡುವೆ ವಾಗ್ವಾದ ಉಂಟಾಗಿ, ಬಳಿಕ ಪ್ರತಿಭಟನೆ ಉಗ್ರ ರೂಪ ಪಡೆಯಿತು.

ಸರ್ಕಾರ ಯಾವುದೇ ರೀತಿಯ ಪೂರ್ವಾನುಮತಿ ಅಥವಾ ರೈತರ ಒಪ್ಪಿಗೆ ಪಡೆಯದೆ ಬಲವಂತವಾಗಿ ಜಮೀನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿದೆ



ಎಂದು ಆರೋಪಿಸಿದ ರೈತರು, ಅಧಿಕಾರಿಗಳನ್ನು ಸುತ್ತುವರಿದು ಪ್ರತಿಭಟನೆ ನಡೆಸಿದರು. ಈ ವೇಳೆ ಮಹಿಳಾ ರೈತರು ಕೈಯಲ್ಲಿದ್ದ ಪೊರಕೆಗಳಿಂದ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿದರೆ, ಇತರರು ಅಧಿಕಾರಿಗಳ ವಾಹನದತ್ತ ಕಲ್ಲು ತೂರಿ ಆಕ್ರೋಶ ವ್ಯಕ್ತಪಡಿಸಿದರು. ಘಟನೆಯಿಂದ ಕೆಲಕಾಲ ಗ್ರಾಮದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಸರ್ವೆ ಕಾರ್ಯವನ್ನು ಸ್ಥಗಿತಗೊಳಿಸಲಾಯಿತು.

ಘಟನೆ ವೇಳೆ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದ್ದರೂ ಪ್ರತಿಭಟನಾಕಾರರ ಆಕ್ರೋಶವನ್ನು ನಿಯಂತ್ರಿಸಲು ಆರಂಭದಲ್ಲಿ ಸಾಧ್ಯವಾಗಲಿಲ್ಲ. ಮಾಹಿತಿ ತಿಳಿದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ ಗೌಡ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮಚಂದ್ರಯ್ಯ, ಉಪವಿಭಾಗಾಧಿಕಾರಿ (ಡಿವೈಎಸ್ಪಿ) ಗಿರೀಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಸ್ಥಳದಲ್ಲೇ ಬೀಡುಬಿಟ್ಟು ರೈತರೊಂದಿಗೆ ಮಾತುಕತೆ ನಡೆಸಿದರು.

## ಶಾಸಕ ಬಸವರಾಜ್ ರಾಯರೆಡ್ಡಿ ಅವರ ಆಪ್ತನ ಡೀಲಿಂಗ್ ವೀಡಿಯೋ ವೈರಲ್

ಕೊಪ್ಪಳ: ಕೊಪ್ಪಳ ಜಿಲ್ಲೆಯ ಯಲಬುರ್ಗಾ ವಿಧಾನಸಭಾ ಕ್ಷೇತ್ರದಲ್ಲಿ ವಿಂಡ್ ಪವರ್, ಸೋಲಾರ್ ಹಾಗೂ ಕೆಪಿಟಿಸಿಎಲ್ ವಿದ್ಯುತ್ ಸಬ್‌ಸ್ಟೇಷನ್‌ಗಳಿಗಾಗಿ ಜಮೀನು ಸ್ವಾಧೀನ ಪ್ರಕ್ರಿಯೆ ತೀವ್ರ ಚರ್ಚೆಗೆ ಗ್ರಾಸವಾಗಿರುವ ನಡುವೆಯೇ, ಕಾಂಗ್ರೆಸ್ ಶಾಸಕ ಬಸವರಾಜ್ ರಾಯರೆಡ್ಡಿ ಅವರ ಆಪ್ತ ಎನ್ನಲಾದ ಎಸ್.ಆರ್. ನವಲಿ ಹಿರೇಮಠ ರೈತರೊಂದಿಗೆ ಜಮೀನು ವ್ಯವಹಾರ ನಡೆಸುತ್ತಿರುವುದಾಗಿ ಹೇಳಲಾದ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿವೆ.

ವೈರಲ್ ಆಗಿರುವ ವಿಡಿಯೋದಲ್ಲಿ ಎಸ್. ಆರ್. ನವಲಿ ಹಿರೇಮಠ ಅವರು ಯಲಬುರ್ಗಾ ಭಾಗದ ರೈತರ ಸಭೆ ನಡೆಸಿ, ಕೆಪಿಟಿಸಿಎಲ್ ವಿದ್ಯುತ್



ಸಬ್‌ಸ್ಟೇಷನ್‌ಗೆ ಜಮೀನು ನೀಡುವ ಕುರಿತು ಮಾತುಕತೆ ನಡೆಸುತ್ತಿರುವ ದೃಶ್ಯಗಳಿವೆ. ಸಭೆಯಲ್ಲಿ ರೈತರು ಪ್ರತಿ ಎಕರೆಗೆ 40 ಲಕ್ಷ ರೂ. ಬೇಡಿಕೆ ಇಟ್ಟಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, "30 ರಿಂದ 32 ಲಕ್ಷ ರೂ.ಗೆ ಒಪ್ಪಂದ ಆಗಬಹುದು" ಎಂದು ಹೇಳುತ್ತಿರುವುದು ವಿಡಿಯೋದಲ್ಲಿ ಕೇಳಿಬಂದಿದೆ.

ಇದೇ ವೇಳೆ, "ಮೊದಲು ಜಮೀನು ನೀಡಲು ಒಪ್ಪಿಗೆ ನೀಡಿ ಸಹಿ ಹಾಕಿ. ನಂತರ ಅಧಿಕಾರಿಗಳು ಪರಿಶೀಲನೆ ನಡೆಸುತ್ತಾರೆ. ಅಲ್ಲಿ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರು (ಎಂಡಿ) ಹಾಗೂ ಐಎಎಸ್ ಅಧಿಕಾರಿ ಇರುತ್ತಾರೆ" ಎಂದು ಹೇಳಿರುವ ಆಡಿಯೋ ಹಾಗೂ ವಿಡಿಯೋ ಕೂಡ ವೈರಲ್ ಆಗಿದೆ. ಈ ಬೆಳವಣಿಗೆ ರಾಜಕೀಯವಾಗಿ ಮತ್ತಷ್ಟು ಕುತೂಹಲಕ್ಕೆ ಕಾರಣವಾಗಿದೆ. ಒಂದು ಕಡೆ ಶಾಸಕ ಬಸವರಾಜ್ ರಾಯರೆಡ್ಡಿ ಅವರು ರೈತರು ಯಾವುದೇ ಕಾರಣಕ್ಕೂ ಕಂಪನಿಗಳಿಗೆ ಜಮೀನು ನೀಡಬಾರದು ಎಂದು ಬಹಿರಂಗವಾಗಿ ಮನವಿ ಮಾಡುತ್ತಾ ಪತ್ರ ಬರೆದು ಜಾಗೃತಿ ಮೂಡಿಸುತ್ತಿದ್ದರೆ, ಮತ್ತೊಂದೆಡೆ ಅವರ ಆಪ್ತ ಎನ್ನಲಾದ ವ್ಯಕ್ತಿ ರೈತರೊಂದಿಗೆ ಜಮೀನು ವ್ಯವಹಾರದ ಮಾತುಕತೆ ನಡೆಸುತ್ತಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಈ ವಿಡಿಯೋಗಳ ಹಿನ್ನೆಲೆಯಲ್ಲಿ, ಶಾಸಕರ ಆಪ್ತರು ಜಮೀನು ವ್ಯವಹಾರದಲ್ಲಿ ತೊಡಗಿದ್ದಾರೆಯೇ? ಅಥವಾ ರೈತರನ್ನು ಕಂಪನಿಗಳ ಪರವಾಗಿ ಒಪ್ಪಿಸಲು ಪ್ರಯತ್ನಿಸುತ್ತಿದ್ದಾರೆಯೇ? ಎಂಬ ಪ್ರಶ್ನೆಗಳು ಸ್ಥಳೀಯವಾಗಿ ಕೇಳಿಬರುತ್ತಿವೆ. ಆದರೆ, ವೈರಲ್ ಆಗಿರುವ ವಿಡಿಯೋಗಳ ಸತ್ಯಾಸತ್ಯತೆ ಹಾಗೂ ಆರೋಪಗಳ ಬಗ್ಗೆ ಅಧಿಕಾರಿಗಳು ಅಥವಾ ಸಂಬಂಧಪಟ್ಟವರಿಂದ ಯಾವುದೇ ಅಧಿಕೃತ ಸ್ಪಷ್ಟನೆ ಇದುವರೆಗೆ ಪ್ರಕಟವಾಗಿಲ್ಲ.

## 19ಕ್ಕೆ ಸರ್ವಪಕ್ಷ ಸಭೆ

ನವದೆಹಲಿ: ಸಂಸತ್ತಿನ ಮುಂಗಾರು ಅಧಿವೇಶನ ಆರಂಭಕ್ಕೂ ಒಂದು ದಿನ ಮುನ್ನ ಕೇಂದ್ರ ಸರ್ಕಾರ ಜುಲೈ 19ರಂದು ಬೆಳಿಗ್ಗೆ 11 ಗಂಟೆಗೆ ಸರ್ವಪಕ್ಷ ಸಭೆ ಕರೆದಿದೆ. ಉಭಯ ಸದನಗಳ ಸುಗಮ ಕಲಾಪ, ಶಾಸನಾತ್ಮಕ ಕಾರ್ಯಸೂಚಿ ಹಾಗೂ ಅಧಿವೇಶನದ ಪ್ರಮುಖ ವಿಷಯಗಳ ಕುರಿತು ಈ ಸಭೆಯಲ್ಲಿ ಚರ್ಚೆ ನಡೆಯಲಿದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಅನುಮೋದನೆಯಂತೆ ಮುಂಗಾರು ಅಧಿವೇಶನವು ಜುಲೈ 20ರಿಂದ ಆಗಸ್ಟ್ 13ರವರೆಗೆ ನಡೆಯಲಿದೆ. ಈ ಅವಧಿಯಲ್ಲಿ ಕೇಂದ್ರ ಸರ್ಕಾರ ಹಲವು ಮಹತ್ವದ ಮಸೂದೆಗಳನ್ನು ಮಂಡಿಸಲು ಸಿದ್ಧತೆ ನಡೆಸಿದೆ. ಇದರಲ್ಲಿ ಪ್ರಧಾನಿ, ಮುಖ್ಯಮಂತ್ರಿಗಳು ಹಾಗೂ ಸಚಿವರು ಗಂಭೀರ ಅಪರಾಧ ಪ್ರಕರಣಗಳಲ್ಲಿ 30 ದಿನಗಳ ಕಾಲ ನ್ಯಾಯಾಂಗ ಬಂಧನದಲ್ಲಿದ್ದರೆ ಅವರ ಹುದ್ದೆಯ ಕುರಿತು ಕ್ರಮ ಕೈಗೊಳ್ಳುವ 130ನೇ ಸಂವಿಧಾನ ತಿದ್ದುಪಡಿ ಮಸೂದೆ, ಮಹಿಳೆಯರಿಗೆ ಸಂಸತ್ತು ಹಾಗೂ ವಿಧಾನಸಭೆಗಳಲ್ಲಿ ಶೇ.33 ಮೀಸಲಾತಿ ನೀಡುವ ಮಸೂದೆ ಮತ್ತು ಕ್ಷೇತ್ರ ಮರುವಿಂಗಡಣೆ (ಡಿಲಿಮಿಟೇಶನ್) ಮಸೂದೆ ಪ್ರಮುಖವಾಗಿವೆ.

ಇನ್ನೊಂದೆಡೆ, ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳ ಒಕ್ಕೂಟವು ಸರ್ಕಾರವನ್ನು ವಿವಿಧ ವಿಚಾರಗಳಲ್ಲಿ ತರಾಟೆಗೆ ತೆಗೆದುಕೊಳ್ಳಲು ಸಜ್ಜಾಗಿದೆ. ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ, ಆಪರೇಷನ್ ಸಿಂಧೂರ್ ಸಂಬಂಧದ ಸಾವು–ನೋವುಗಳು, ಹಣದುಬ್ಬರ, ನಿರುದ್ಯೋಗ ಹಾಗೂ ರೈತರ ಸಮಸ್ಯೆಗಳನ್ನು ಸದನದಲ್ಲಿ ಪ್ರಸ್ತಾಪಿಸಲು ಪ್ರತಿಪಕ್ಷಗಳು ನಿರ್ಧರಿಸಿವೆ.

ಇತ್ತೀಚಿನ ರಾಜಕೀಯ ಬೆಳವಣಿಗೆಗಳೂ ಅಧಿವೇಶನದಲ್ಲಿ ಪ್ರತಿಧ್ವನಿಸುವ ಸಾಧ್ಯತೆ ಇದೆ. ಟಿಎಂಸಿಯ ಕೆಲವು ಸಂಸದರು ಎನ್‌ಡಿಎಗೆ ಬೆಂಬಲ ಘೋಷಿಸಿರುವುದು, ಶಿವಸೇನೆ (ಯುಬಿಟಿ) ಹಾಗೂ ಆಪ್‌ನ ಕೆಲ ಸಂಸದರು ಆಡಳಿತ ಪಕ್ಷದತ್ತ ಒಲವು ತೋರಿರುವುದು, ಡಿಎಂಕೆ ಲೋಕಸಭೆಯಲ್ಲಿ ಪ್ರತ್ಯೇಕ ಆಸನ ವ್ಯವಸ್ಥೆ ಕೋರಿರುವುದು ಪ್ರತಿಪಕ್ಷಗಳ ಒಗ್ಗಟ್ಟಿನ ಬಗ್ಗೆ ಚರ್ಚೆಗೆ ಕಾರಣವಾಗಿದೆ.

ಜುಲೈ 17ರಂದು 130ನೇ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಪರಿಶೀಲಿಸುತ್ತಿರುವ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ತನ್ನ ವರದಿಯನ್ನು ಅಂಗೀಕರಿಸಿ ಸಂಸತ್ತಿಗೆ ಸಲ್ಲಿಸುವ ಸಾಧ್ಯತೆ ಇದೆ. ಮೂಲಗಳ ಪ್ರಕಾರ, ಸಮಿತಿಯು ಶಾಶ್ವತ ಪದಚ್ಯುತಿಯ ಬದಲು 30 ದಿನಗಳ ನಿರಂತರ ನ್ಯಾಯಾಂಗ ಬಂಧನದ ಬಳಿಕ ತಾತ್ಕಾಲಿಕ ಅಮಾನತು ಮಾಡುವಂತೆ ಶಿಫಾರಸು ಮಾಡುವ ಸಾಧ್ಯತೆಯಿದೆ. ಬಳಿಕ ನ್ಯಾಯಾಲಯದಿಂದ ಖುಲಾಸೆಯಾದರೆ ಅಥವಾ ಆರೋಪ ಸಾಬೀತಾಗದಿದ್ದರೆ ಸ್ವಯಂಚಾಲಿತವಾಗಿ ಹುದ್ದೆಗೆ ಮರುಸ್ಥಾಪಿಸುವ ವ್ಯವಸ್ಥೆಯನ್ನೂ ಶಿಫಾರಸು ಮಾಡಲಾಗಿದೆ ಎನ್ನಲಾಗಿದೆ.

## ಕಾನ್‌ಸ್ಟೇಬಲ್ ವಜಾ

ಕಾರವಾರ: ಅಕ್ರಮವಾಗಿ ಗೋವಾ ಮದ್ಯ ಸಾಗಾಟ ಪ್ರಕರಣದಲ್ಲಿ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಪೊಲೀಸ್ ಕಾನ್‌ಸ್ಟೇಬಲ್ ಸಂತೋಷ ಲಮಾಣಿ ಅವರನ್ನು ಸೇವೆಯಿಂದ ವಜಾಗೊಳಿಸಲಾಗಿದೆ.

ಉತ್ತರ ಕನ್ನಡ ಜಿಲ್ಲಾ ಪೊಲೀಸ್ ಇಲಾಖೆಯಲ್ಲಿ ಇತ್ತೀಚಿನ ವರ್ಷಗಳಲ್ಲಿ ಪೊಲೀಸ್ ಸಿಬ್ಬಂದಿಯೊಬ್ಬರನ್ನು ಸೇವೆಯಿಂದಲೇ ವಜಾಗೊಳಿಸಿರುವ ಅಪರೂಪದ ಪ್ರಕರಣ ಇದಾಗಿದೆ. ಈ ಹಿಂದೆ ಹಲವು ಬಾರಿ ಅಮಾನತಿನ ಶಿಕ್ಷೆ ಅನುಭವಿಸಿದ್ದರೂ ಅಕ್ರಮ ಚಟುವಟಿಕೆಗಳಿಂದ ಹಿಂದೆ ಸರಿಯದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

2024ರ ಜೂನ್‌ನಲ್ಲಿ ಗೋವಾದಿಂದ ಗೋಕರ್ಣದ ಓಂ ಬೀಚ್ ಪ್ರದೇಶಕ್ಕೆ ಮಾರಾಟದ ಉದ್ದೇಶದಿಂದ ಅಕ್ರಮವಾಗಿ ಮದ್ಯ ಸಾಗಾಟ ಮಾಡುತ್ತಿದ್ದ ವೇಳೆ ಸಂತೋಷ ಲಮಾಣಿ ಪೊಲೀಸರ ಬಲೆಗೆ ಬಿದ್ದಿದ್ದರು. ಕಾರ್ಯಾಚರಣೆ ನಡೆಸುತ್ತಿದ್ದ ಪೊಲೀಸರ ಮೇಲೆಯೇ ವಾಹನ ಚಲಾಯಿಸಿ ತಪ್ಪಿಸಿಕೊಳ್ಳಲು ಯತ್ನಿಸಿದ ಆರೋಪವೂ ಅವರ ವಿರುದ್ಧ ದಾಖಲಾಗಿತ್ತು. ಈ ಘಟನೆಯ ಬಳಿಕ ಅವರನ್ನು ಅಮಾನತುಗೊಳಿಸಿ ಇಲಾಖಾ ತನಿಖೆಗೆ ಆದೇಶಿಸಲಾಗಿತ್ತು. ಆರೋಪಿ ಪರವಾಗಿ ಇಲಾಖಾ ವಿಚಾರಣೆಯಲ್ಲಿ ವಕೀಲರು ವಾದ ಮಂಡಿಸಿದರೂ ಆರೋಪಗಳನ್ನು ಅಲ್ಲಗಳೆಯಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್. ಅವರು ಪೊಲೀಸ್ ಕಾನ್‌ಸ್ಟೇಬಲ್ ಸಂತೋಷ ಲಮಾಣಿ ಅವರನ್ನು ಸೇವೆಯಿಂದ ವಜಾಗೊಳಿಸಿ ಆದೇಶ ಹೊರಡಿಸಿದ್ದಾರೆ.

## ರೇವಣ್ಣ ಮೇಲೆ ಆರೋಪ ಹೊರಿಸಲಾಗದು: ಸುಪ್ರೀಂ

ನವದೆಹಲಿ: ಶಾಸಕ ಹೆಚ್.ಡಿ. ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ, ಬೆದರಿಕೆ ಹಾಗೂ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶದ ಬಗ್ಗೆ ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ.

ಹೆಚ್.ಡಿ. ರೇವಣ್ಣ ವಿರುದ್ಧ ದಾಖಲಾದ ಪ್ರಕರಣದಲ್ಲಿ ಹೈಕೋರ್ಟ್ ಹಲ್ಲೆ ಆರೋಪವನ್ನು ರದ್ದುಪಡಿಸಿ, ಲೈಂಗಿಕ ದೌರ್ಜನ್ಯ ಆರೋಪದ ತನಿಖೆ ಮುಂದುವರಿಯಲು ಅವಕಾಶ ನೀಡಿತ್ತು. ಈ ಆದೇಶವನ್ನು ಪ್ರಶ್ನಿಸಿ ಕರ್ನಾಟಕ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು.

ನ್ಯಾಯಮೂರ್ತಿ ಜೆ.ಬಿ. ಪಾರ್ದಿವಾಲ ನೇತೃತ್ವದ ಪೀಠ ಅರ್ಜಿಯ ವಿಚಾರಣೆ ನಡೆಸಿದ ವೇಳೆ, ಆರೋಪಗಳ ಸ್ವರೂಪವನ್ನು ಹೈಕೋರ್ಟ್ ಏಕೆ ಬದಲಾಯಿಸಿತು ಎಂದು ಪ್ರಶ್ನಿಸಿ ಅಸಮಾಧಾನ ವ್ಯಕ್ತಪಡಿಸಿತು.

ಭಾರತ ಸಾರಥಿ
14/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸೈಬರ್ ವಂಚನೆ ವಿರುದ್ಧ ಬಂಧನ್ ಬ್ಯಾಂಕ್‌ನ 'ಸೈಬರ್ ಕಾಪ್' ಅಭಿಯಾನ

ಬೆಂಗಳೂರು

ಡಿಜಿಟಲ್ ವಹಿವಾಟುಗಳ ಸುರಕ್ಷತೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಬಂಧನ್ ಬ್ಯಾಂಕ್ ತನ್ನ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಕಾರ್ಯಕ್ರಮದಡಿ ರಾಷ್ಟ್ರವ್ಯಾಪಿ 'ಸೈಬರ್ ಕಾಪ್' ಅಭಿಯಾನವನ್ನು ಆರಂಭಿಸಿರುವುದಾಗಿ ಘೋಷಿಸಿದೆ. ಈ ಜಾಗೃತಿ ಅಭಿಯಾನಕ್ಕೆ ಖ್ಯಾತ ಚಿತ್ರ ನಿರ್ದೇಶಕ ರೋಹಿತ್ ಶೆಟ್ಟಿ ಕೈಜೋಡಿಸಿದ್ದು, ಸೈಬರ್ ಅಪರಾಧಗಳ ವಿರುದ್ಧ ಜನರಲ್ಲಿ ಅರಿವು ಮೂಡಿಸುವ ಕಾರ್ಯಕ್ಕೆ ಬೆಂಬಲ ನೀಡಿದ್ದಾರೆ.

ದೇಶಾದ್ಯಂತ ಹೆಚ್ಚುತ್ತಿರುವ ಸೈಬರ್ ವಂಚನೆ ಪ್ರಕರಣಗಳ ಹಿನ್ನೆಲೆಯಲ್ಲಿ ಆರಂಭಿಸಲಾಗಿರುವ ಈ ಅಭಿಯಾನವು, ಡಿಜಿಟಲ್ ಜಗತ್ತಿನಲ್ಲಿ ಸುರಕ್ಷಿತವಾಗಿ ವ್ಯವಹರಿಸುವ ಕುರಿತು ನಾಗರಿಕರಿಗೆ ಮಾರ್ಗದರ್ಶನ ನೀಡುವ ಜೊತೆಗೆ, ವಂಚನೆಗಳಿಂದ ಹೇಗೆ ಎಚ್ಚರಿಕೆಯಿಂದ ಇರಬೇಕು ಎಂಬುದರ ಬಗ್ಗೆ ಮಾಹಿತಿ ನೀಡಲಿದೆ.

ಸರ್ಕಾರದ ಅಂಕಿ–ಅಂಶಗಳ ಪ್ರಕಾರ, 2025ರಲ್ಲಿ ರಾಷ್ಟ್ರೀಯ ಸೈಬರ್ ಅಪರಾಧ ವರದಿ ಪೋರ್ಟಲ್‌ನಲ್ಲಿ ಸುಮಾರು 24 ಲಕ್ಷ ಸೈಬರ್ ಅಪರಾಧ ದೂರುಗಳು ದಾಖಲಾಗಿದ್ದು, ಈ ಅಪರಾಧಗಳಿಂದ ಒಟ್ಟು 22,495 ಕೋಟಿ ರೂಪಾಯಿ ನಷ್ಟ ಸಂಭವಿಸಿದೆ. ಈ ಆತಂಕಕಾರಿ ಬೆಳವಣಿಗೆಯ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಅರಿವು ಮೂಡಿಸುವ ಅಗತ್ಯವನ್ನು ಬಂಧನ್ ಬ್ಯಾಂಕ್ ಒತ್ತಿಹೇಳಿದೆ.

'ಸೈಬರ್ ಕಾಪ್' ಅಭಿಯಾನದಡಿ ದೃಶ್ಯ ಮಾಧ್ಯಮಗಳು, ಜಾಗೃತಿ ಸಂದೇಶಗಳು ಹಾಗೂ ನೇರ ಸಾರ್ವಜನಿಕ ಸಂಪರ್ಕ ಕಾರ್ಯಕ್ರಮಗಳ ಮೂಲಕ ಸೈಬರ್ ಸುರಕ್ಷತಾ ಕ್ರಮಗಳನ್ನು ಸರಳವಾಗಿ ವಿವರಿಸಲಾಗುತ್ತದೆ.

ವಿಶೇಷವಾಗಿ "ಸಾವಧಾನದಿಂದಿರಿ, ಪರಿಶೀಲಿಸಿ, ವರದಿ ಮಾಡಿ" ಎಂಬ ಸಂದೇಶವನ್ನು ಜನರಿಗೆ ತಲುಪಿಸುವ ಮೂಲಕ ವಂಚನೆಗಳನ್ನು ತಡೆಗಟ್ಟುವ ಬಗ್ಗೆ ಅರಿವು ಮೂಡಿಸಲಾಗುತ್ತದೆ.

ಯಾವುದೇ ಸೈಬರ್ ವಂಚನೆ ಅಥವಾ ಅನುಮಾನಾಸ್ಪದ ಚಟುವಟಿಕೆ ಕಂಡುಬಂದಲ್ಲಿ ಅದನ್ನು ತಕ್ಷಣವೇ ರಾಷ್ಟ್ರೀಯ ಸೈಬರ್ ಅಪರಾಧ ವರದಿ ಪೋರ್ಟಲ್ ಅಥವಾ 1930 ಸಹಾಯವಾಣಿ ಮೂಲಕ ವರದಿ ಮಾಡುವಂತೆ ಸಾರ್ವಜನಿಕರನ್ನು ಅಭಿಯಾನದ ಮೂಲಕ ಪ್ರೋತ್ಸಾಹಿಸಲಾಗುತ್ತಿದೆ.

ಬಂಧನ್ ಬ್ಯಾಂಕ್ ಈ ಅಭಿಯಾನದ ಮೂಲಕ ಡಿಜಿಟಲ್ ವಹಿವಾಟುಗಳನ್ನು ಮತ್ತಷ್ಟು ಸುರಕ್ಷಿತಗೊಳಿಸುವುದರ ಜೊತೆಗೆ, ಸೈಬರ್ ಅಪರಾಧಗಳ ವಿರುದ್ಧ ಸಾರ್ವಜನಿಕರ ಜಾಗೃತಿ ಮತ್ತು ಜವಾಬ್ದಾರಿಯನ್ನು ಹೆಚ್ಚಿಸುವ ಗುರಿ ಹೊಂದಿದೆ.

# ಹೈದರಾಬಾದ್‌ನಲ್ಲಿ ಟೆಸ್ಟಿಂಗ್‌ಎಕ್ಸ್‌ಪರ್ಟ್ಸ್‌ನ ನೂತನ ವಿತರಣಾ ಕೇಂದ್ರ ಉದ್ಘಾಟನೆ

ಬೆಂಗಳೂರು

ಜಾಗತಿಕ ಗುಣಮಟ್ಟ ಎಂಜಿನಿಯರಿಂಗ್ ಮತ್ತು ಸಾಫ್ಟ್‌ವೇರ್ ಪರೀಕ್ಷಾ ಕ್ಷೇತ್ರದ ಪ್ರಮುಖ ಸಂಸ್ಥೆಯಾದ ಟೆಸ್ಟಿಂಗ್‌ಎಕ್ಸ್‌ಪರ್ಟ್ಸ್, ತನ್ನ ಜಾಗತಿಕ ವಿಸ್ತರಣಾ ಕಾರ್ಯತಂತ್ರದ ಭಾಗವಾಗಿ ಹೈದರಾಬಾದ್‌ನಲ್ಲಿ ಹೊಸ ಅತ್ಯಾಧುನಿಕ ವಿತರಣಾ ಕೇಂದ್ರವನ್ನು ಆರಂಭಿಸಿರುವುದಾಗಿ ಘೋಷಿಸಿದೆ.

300 ಆಸನಗಳ ಸಾಮರ್ಥ್ಯ ಹೊಂದಿರುವ ಈ ನೂತನ ಕೇಂದ್ರವು ಹೈದರಾಬಾದ್‌ನಲ್ಲಿ 2,500 ಆಸನಗಳ ತಂತ್ರಜ್ಞಾನ ಕ್ಯಾಂಪಸ್ ನಿರ್ಮಿಸುವ ಸಂಸ್ಥೆಯ ದೀರ್ಘಕಾಲೀನ ಯೋಜನೆಯ ಮೊದಲ ಹಂತವಾಗಿದೆ.

ಈ ಮೂಲಕ ಭಾರತವನ್ನು ಜಾಗತಿಕ ನಾವೀನ್ಯತೆ ಹಾಗೂ ತಂತ್ರಜ್ಞಾನ ವಿತರಣೆಯ ಪ್ರಮುಖ ಕೇಂದ್ರವನ್ನಾಗಿ ರೂಪಿಸುವ ಉದ್ದೇಶವನ್ನು ಸಂಸ್ಥೆ ಹೊಂದಿದೆ.

ಹೈದರಾಬಾದ್ ಕೇಂದ್ರವು ಕೃತಕ ಬುದ್ಧಿಮತ್ತೆ ಆಧಾರಿತ ಗುಣಮಟ್ಟ ಎಂಜಿನಿಯರಿಂಗ್, ಕೃತಕ ಬುದ್ಧಿಮತ್ತೆ ಭರವಸೆ, ಡಿಜಿಟಲ್ ಎಂಜಿನಿಯರಿಂಗ್ ಹಾಗೂ ಎಂಟರ್‌ಪ್ರೈಸ್ ತಂತ್ರಜ್ಞಾನ ಸೇವೆಗಳ ಜಾಗತಿಕ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ. ಉತ್ತರ ಅಮೆರಿಕಾ, ಯುರೋಪ್, ಮಧ್ಯಪ್ರಾಚ್ಯ, ಆಫ್ರಿಕಾ ಹಾಗೂ ಏಷ್ಯಾ–ಪೆಸಿಫಿಕ್ ಪ್ರದೇಶಗಳ ಗ್ರಾಹಕರಿಗೆ ಇಲ್ಲಿಂದ ಸೇವೆಗಳನ್ನು ಒದಗಿಸಲಾಗುತ್ತದೆ.

ಈ ಹೂಡಿಕೆಯಿಂದ ಕಂಪನಿಯ ಜಾಗತಿಕ ವಿತರಣಾ ಸಾಮರ್ಥ್ಯ ಮತ್ತಷ್ಟು ವಿಸ್ತರಿಸಲಿದ್ದು, ಕೃತಕ ಬುದ್ಧಿಮತ್ತೆ ಆಧಾರಿತ ಸಾಫ್ಟ್‌ವೇರ್ ಗುಣಮಟ್ಟ, ಉದ್ಯಮ ಆಧುನೀಕರಣ ಹಾಗೂ ಡಿಜಿಟಲ್ ರೂಪಾಂತರ ಕ್ಷೇತ್ರಗಳಲ್ಲಿ ಹೆಚ್ಚುತ್ತಿರುವ ಬೇಡಿಕೆಯನ್ನು ಪರಿಣಾಮಕಾರಿಯಾಗಿ ಪೂರೈಸಲು ನೆರವಾಗಲಿದೆ ಎಂದು ಸಂಸ್ಥೆ ತಿಳಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಟೆಸ್ಟಿಂಗ್‌ಎಕ್ಸ್‌ಪರ್ಟ್ಸ್ ಸಂಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮನೀಶ್ ಗುಪ್ತಾ, ಹೈದರಾಬಾದ್ ಕೇವಲ ಹೊಸ ಕಚೇರಿಯಲ್ಲ, ಜಾಗತಿಕ ಬೆಳವಣಿಗೆಯ ಮುಂದಿನ ಹಂತಕ್ಕೆ ಬುನಾದಿ ಹಾಕುವ ಕಾರ್ಯತಂತ್ರದ ಹೂಡಿಕೆ ಎಂದು ಹೇಳಿದರು.

ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ತಂತ್ರಜ್ಞಾನ ಪರಿಸರ ವ್ಯವಸ್ಥೆಗಳಲ್ಲಿ ಒಂದಾದ ಹೈದರಾಬಾದ್‌ನಲ್ಲಿ ಕೃತಕ ಬುದ್ಧಿಮತ್ತೆ, ಗುಣಮಟ್ಟ ಎಂಜಿನಿಯರಿಂಗ್ ಹಾಗೂ ಡಿಜಿಟಲ್ ಎಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಅತ್ಯುತ್ತಮ ಪ್ರತಿಭೆಗಳು ಲಭ್ಯವಿದ್ದು, ಜಾಗತಿಕ ಗ್ರಾಹಕರಿಗೆ ಭವಿಷ್ಯದ ಅಗತ್ಯಗಳಿಗೆ ತಕ್ಕ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ಇದು ಸೂಕ್ತ ಕೇಂದ್ರವಾಗಿದೆ ಎಂದು ಅವರು ತಿಳಿಸಿದರು.

# ಒಬಿಸಿ ಬೇಡಿಕೆಗಳ ಪರಿಹಾರಕ್ಕೆ ಮುಂದಾಳತ್ವ ವಹಿಸುವಂತೆ ಸಿಎಂ ಡಿ.ಕೆ.ಶಿವಕುಮಾರ್‌ಗೆ ಮನವಿ




ಬೆಂಗಳೂರು: ದೇಶಾದ್ಯಂತ ಇತರೆ ಹಿಂದುಳಿದ ವರ್ಗಗಳ (ಒಬಿಸಿ) ಸಮಸ್ಯೆಗಳು ಮತ್ತು ಬೇಡಿಕೆಗಳ ಕುರಿತು ರಾಜ್ಯ ಸರ್ಕಾರದ ಮಟ್ಟದಲ್ಲಿ ಮುಂದಾಳತ್ವ ವಹಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬಿಸಿ ಕಲ್ಯಾಣ ಸಂಘದ ರಾಷ್ಟ್ರೀಯ ಅಧ್ಯಕ್ಷ ಜಾಜುಲ ಶ್ರೀನಿವಾಸ್ ಗೌಡ್ ನೇತೃತ್ವದ ಒಬಿಸಿ ಮುಖಂಡರ ನಿಯೋಗ ಮನವಿ ಸಲ್ಲಿಸಿತು. ಇದೇ ವೇಳೆ, ಆಗಸ್ಟ್ 7ರಂದು ಬೆಂಗಳೂರಿನಲ್ಲಿ ನಡೆಯಲಿರುವ 11ನೇ ಅಖಿಲ ಭಾರತ ರಾಷ್ಟ್ರೀಯ ಒಬಿಸಿ ಮಹಾಸಭೆಗೆ ಮುಖ್ಯ ಅತಿಥಿಯಾಗಿ ಭಾಗವಹಿಸುವಂತೆ ಮುಖ್ಯಮಂತ್ರಿಗೆ ಆಹ್ವಾನ ನೀಡಲಾಯಿತು.

ಬೆಂಗಳೂರು ಕೃಷ್ಣ ಹೌಸ್‌ನಲ್ಲಿ ನಡೆದ ಭೇಟಿಯಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಉಪಸ್ಥಿತರಿದ್ದರು. ಮಹಾರಾಷ್ಟ್ರದ ಪ್ರೊ. ಬಾಬನ್ ರಾವ್ ತೈವಾಡೆ, ಆಂಧ್ರಪ್ರದೇಶದ ಕೇಸನ ಶಂಕರರಾವ್, ಕರ್ನಾಟಕದ ಲಕ್ಷ್ಮಣ್, ತೆಲಂಗಾಣದ ಕುಲ್ಕಚರ್ಲ ಶ್ರೀನಿವಾಸ್ ಮುದಿರಾಜ್ ಸೇರಿದಂತೆ ವಿವಿಧ ರಾಜ್ಯಗಳ ಸುಮಾರು 15 ಮಂದಿ ಒಬಿಸಿ ಪ್ರತಿನಿಧಿಗಳು ಭಾಗವಹಿಸಿದ್ದರು. ಸುಮಾರು 20 ನಿಮಿಷಗಳ ಕಾಲ ನಡೆದ ಸಭೆಯಲ್ಲಿ ದೇಶಾದ್ಯಂತ ಒಬಿಸಿ ಸಮುದಾಯ ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಪ್ರಮುಖ ಬೇಡಿಕೆಗಳ ಕುರಿತು ಚರ್ಚೆ ನಡೆಯಿತು.

ಸಭೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಜಾಜುಲ ಶ್ರೀನಿವಾಸ್ ಗೌಡ್, ದೇಶದಲ್ಲಿ ನಡೆಯುತ್ತಿರುವ ಜಾತಿ ಜನಗಣತಿಯಲ್ಲಿ ಒಬಿಸಿ ಕುಟುಂಬಗಳನ್ನು ಪ್ರತ್ಯೇಕವಾಗಿ ಪರಿಗಣಿಸಬೇಕೆಂಬ ಬೇಡಿಕೆಯನ್ನು ಮುಖ್ಯಮಂತ್ರಿಯವರ ಗಮನಕ್ಕೆ ತಂದಿರುವುದಾಗಿ ಹೇಳಿದರು. ಮಹಿಳಾ ಮೀಸಲಾತಿ ಮಸೂದೆಯಲ್ಲಿ ಒಬಿಸಿ ಮಹಿಳೆಯರಿಗೆ ಉಪಮೀಸಲಾತಿ ಕಲ್ಪಿಸದಿದ್ದರೆ ಅವರಿಗೆ ವಿಧಾನಸಭೆ ಮತ್ತು ಸಂಸತ್ತಿನಲ್ಲಿ ಸಮರ್ಪಕ ಪ್ರಾತಿನಿಧ್ಯ ದೊರೆಯುವುದಿಲ್ಲ ಎಂಬ ಆತಂಕವನ್ನು ವ್ಯಕ್ತಪಡಿಸಿದರು.

ಇತರೆ ವರ್ಗಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ನೀಡಲಾಗುತ್ತಿದೆಯಾದರೂ, ಒಬಿಸಿಗಳಿಗೆ ಅದೇ ಪ್ರಮಾಣದಲ್ಲಿ ಅವಕಾಶಗಳು ದೊರೆಯುತ್ತಿಲ್ಲ ಎಂದು ಅವರು ಆರೋಪಿಸಿದರು. ಒಬಿಸಿ ಸಮುದಾಯದ ಹಕ್ಕುಗಳಿಗಾಗಿ ದೇಶದಾದ್ಯಂತ ಸಂಘಟನೆಗಳು ಹೋರಾಟ ನಡೆಸುತ್ತಿದ್ದು, ಈ ಹೋರಾಟಕ್ಕೆ ರಾಜ್ಯ ಸರ್ಕಾರದ ಬೆಂಬಲ ಹಾಗೂ ನಾಯಕತ್ವ ನೀಡುವಂತೆ ಮುಖ್ಯಮಂತ್ರಿಗೆ ಮನವಿ ಮಾಡಲಾಗಿದೆ ಎಂದರು.

ರಾಷ್ಟ್ರೀಯ ಮಟ್ಟದಲ್ಲಿ ಒಬಿಸಿಗಳನ್ನು ಸಂಘಟಿಸುವ ಉದ್ದೇಶದಿಂದ ಕಳೆದ ಹತ್ತು ವರ್ಷಗಳಿಂದ ರಾಷ್ಟ್ರೀಯ ಒಬಿಸಿ ಮಹಾಸಭೆಗಳನ್ನು ಆಯೋಜಿಸಲಾಗುತ್ತಿದೆ. ದೆಹಲಿ, ಮುಂಬೈ, ನಾಗ್ಪುರ, ಹೈದರಾಬಾದ್, ತಿರುಪತಿ, ಅಮೃತಸರ, ಗೋವಾ ಹಾಗೂ ಹರಿಯಾಣ ಸೇರಿದಂತೆ ಹಲವು ನಗರಗಳಲ್ಲಿ ಯಶಸ್ವಿಯಾಗಿ ಮಹಾಸಭೆಗಳು ನಡೆದಿದ್ದು, ಈ ಬಾರಿ 11ನೇ ರಾಷ್ಟ್ರೀಯ ಒಬಿಸಿ ಮಹಾಸಭೆ ಬೆಂಗಳೂರಿನ ಡಾ. ಮನಮೋಹನ್ ಸಿಂಗ್ ಸಿಟಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಗಸ್ಟ್ 7ರಂದು ನಡೆಯಲಿದೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಒಬಿಸಿ ಸಮುದಾಯದ ನ್ಯಾಯಸಮ್ಮತ ಬೇಡಿಕೆಗಳ ಪರವಾಗಿ ತಮ್ಮಿಂದಾಗುವ ಎಲ್ಲ ಪ್ರಯತ್ನಗಳನ್ನು ಮಾಡುವುದಾಗಿ ಭರವಸೆ ನೀಡಿದ್ದು, ಕರ್ನಾಟಕದಲ್ಲಿ ನಡೆಯಲಿರುವ ರಾಷ್ಟ್ರೀಯ ಒಬಿಸಿ ಮಹಾಸಭೆಯಲ್ಲಿ ಭಾಗವಹಿಸುವುದಾಗಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಜಾಜುಲ ಶ್ರೀನಿವಾಸ್ ಗೌಡ್ ಹೇಳಿದರು.

ಮುಖ್ಯಮಂತ್ರಿಯನ್ನು ಭೇಟಿಯಾದ ನಿಯೋಗದಲ್ಲಿ ರಾಷ್ಟ್ರೀಯ ಒಬಿಸಿ ಮಹಾಸಂಘದ ಪ್ರಧಾನ ಕಾರ್ಯದರ್ಶಿ ಸಚಿನ್ ರಾಜೋಲ್ಕರ್, ಬಿಸಿ ವಿದ್ಯಾರ್ಥಿ ಸಂಘದ ರಾಷ್ಟ್ರೀಯ ಅಧ್ಯಕ್ಷ ತಾಟಿಕೊಂಡ ವಿಕ್ರಂ ಗೌಡ್, ಬಿಸಿ ಯುವಜನ ಸಂಘದ ರಾಷ್ಟ್ರೀಯ ಅಧ್ಯಕ್ಷ ಕನಕಾಲ ಶ್ಯಾಮ್ ಕುಮಾರ್, ಬಿಸಿ ವಿದ್ಯಾವಂತರ ವೇದಿಕೆಯ ರಾಜ್ಯ ಸಂಯೋಜಕ ಪ್ರೊ. ಸಂಘನಿ ಮಲ್ಲೇಶ್ವರ್, ಬಿಸಿ ಯುವಜನ ಸಂಘದ ರಾಷ್ಟ್ರೀಯ ಉಪಾಧ್ಯಕ್ಷ ರಾವುಲಕೋಲ್ ನರೇಶ್ ಪ್ರಜಾಪತಿ, ರಾಜ್ಯ ಮುಖಂಡರಾದ ರಾಮಕೋಟೇಶ್ವರರಾವ್, ಮೇಕ ವೆಂಕಟೇಶ್ವರರಾವ್, ನಾರಬೋಯಿನ ರವಿ, ಕೋಟೇಶ್ವರರಾವ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಂಗಳೂರಿನಲ್ಲಿ 'ಹೌಸ್ ಆಫ್ ಆವಾಕಿ' ಆರಂಭ

ಬೆಂಗಳೂರು

ಜಪಾನಿನ ಸಾಂಪ್ರದಾಯಿಕ ಚಹಾ ಸಂಸ್ಕೃತಿ ಮತ್ತು ಸಮಕಾಲೀನ ಜಪಾನೀ ಆಹಾರವನ್ನು ಒಂದೇ ಸೂರಿನಡಿ ಪರಿಚಯಿಸುವ ಉದ್ದೇಶದಿಂದ ಹೌಸ್ ಆಫ್ ಆವಾಕಿ ಬೆಂಗಳೂರಿನಲ್ಲಿ ತನ್ನ ಮೊದಲ ಜಪಾನೀ ಟೀ ಹೌಸ್ ಅನ್ನು ಆರಂಭಿಸಿದೆ. ಕಲ್ಯಾಣ ನಗರದಲ್ಲಿರುವ ಈ ಹೊಸ ತಾಣವು ಜಪಾನಿನ ಮಚ ಸಂಸ್ಕೃತಿ, ವಿಶೇಷ ಚಹಾ ಪಾನೀಯಗಳು ಹಾಗೂ ಜಪಾನೀ




ಸ್ಫೂರ್ತಿಯ ತಿನಿಸುಗಳನ್ನು ನಗರದ ಆಹಾರಪ್ರಿಯರಿಗೆ ಪರಿಚಯಿಸುತ್ತಿದೆ.

ಈ ಹೊಸ ಟೀ ಹೌಸ್‌ನಲ್ಲಿ ಆರು ಬಗೆಯ ಸಾಂಪ್ರದಾಯಿಕ ಮಚ ತಳಿಗಳು ಹಾಗೂ ಮೂರು ವಿಶಿಷ್ಟ ಹೌಜಿಚಾ ವಿಧಗಳನ್ನು ಪರಿಚಯಿಸಲಾಗಿದ್ದು, ಸಿಗ್ನೇಚರ್ ಚಹಾ ಪಾನೀಯಗಳು ಮತ್ತು ಸಮಕಾಲೀನ ಜಪಾನೀ ಶೈಲಿಯ ಆಹಾರಗಳ ವಿಶೇಷ ಮೆನು ಸಿದ್ಧಪಡಿಸಲಾಗಿದೆ. ಸಾಂಪ್ರದಾಯಿಕ ಕೆಫೆ ಅನುಭವವನ್ನು ಮೀರಿ ಜಪಾನಿನ ಚಹಾ ಸಂಸ್ಕೃತಿಯನ್ನು ಹತ್ತಿರದಿಂದ ಅನುಭವಿಸುವ ಅವಕಾಶವನ್ನು ಗ್ರಾಹಕರಿಗೆ ಒದಗಿಸುವ ಗುರಿಯನ್ನು ಸಂಸ್ಥೆ ಹೊಂದಿದೆ.

# 'ಇಕ್ಕ' ಚಿತ್ರಕ್ಕೆ ಬೆಂಗಳೂರಿನಲ್ಲಿ ಅದ್ಧೂರಿ ಸ್ವಾಗತ

ಬೆಂಗಳೂರು

ನೆಟ್‌ಫ್ಲಿಕ್ಸ್‌ನಲ್ಲಿ ಬಿಡುಗಡೆಯಾಗಿರುವ 'ಇಕ್ಕ' ಚಲನಚಿತ್ರಕ್ಕೆ ಬೆಂಗಳೂರಿನಲ್ಲಿ ನಡೆದ ವಿಶೇಷ ಪ್ರದರ್ಶನದಲ್ಲಿ ಸಿನಿಪ್ರಿಯರು ಭಾರೀ ಸಂಖ್ಯೆಯಲ್ಲಿ ಭಾಗವಹಿಸಿ ಚಿತ್ರತಂಡಕ್ಕೆ ಆತ್ಮೀಯ ಸ್ವಾಗತ ಕೋರಿದರು. ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ನಟ ಸನ್ನಿ ಡಿಯೋಲ್ ವಿಡಿಯೋ ಕಾಲ್ ಮೂಲಕ ಅಭಿಮಾನಿಗಳೊಂದಿಗೆ ನೇರ ಸಂವಾದ ನಡೆಸಿ ಅಚ್ಚರಿ ಮೂಡಿಸಿದರು.

ವಿಶೇಷ ಪ್ರದರ್ಶನಕ್ಕೆ ಆಗಮಿಸಿದ್ದ ಅಭಿಮಾನಿಗಳೊಂದಿಗೆ ಮಾತನಾಡಿದ ಸನ್ನಿ ಡಿಯೋಲ್, ಚಿತ್ರದ ಬಗ್ಗೆ ವ್ಯಕ್ತವಾಗುತ್ತಿರುವ ಉತ್ತಮ ಪ್ರತಿಕ್ರಿಯೆಗೆ ಸಂತಸ ವ್ಯಕ್ತಪಡಿಸಿದರು.

ತಮ್ಮ ಮೇಲಿನ ಅಭಿಮಾನಿಗಳ ಪ್ರೀತಿ ಮತ್ತು ಬೆಂಬಲಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, 'ಇಕ್ಕ' ಚಿತ್ರದ ಬಿಡುಗಡೆ ಕುರಿತು ತಮ್ಮ ಉತ್ಸಾಹವನ್ನು ಹಂಚಿಕೊಂಡರು.

'ಇಕ್ಕ' ಚಿತ್ರವು ಖ್ಯಾತ ವಕೀಲ ಅರ್ಜುನ್ ಮೆಹ್ತಾ ಅವರ ಜೀವನವನ್ನು ಕೇಂದ್ರವಾಗಿಸಿಕೊಂಡಿದ್ದು, ತಾನು ಅತ್ಯಂತ




ಪ್ರೀತಿಸುವ ವ್ಯಕ್ತಿಗಳು ಹಾಗೂ ತನ್ನ ಸಿದ್ಧಾಂತಗಳ ನಡುವೆ ಆಯ್ಕೆ ಮಾಡಬೇಕಾದ ಸಂಕಷ್ಟದ ಸನ್ನಿವೇಶವನ್ನು ಕಥೆಯಾಗಿ ಕಟ್ಟಿಕೊಡುತ್ತದೆ. ನ್ಯಾಯಾಲಯದ ಹಿನ್ನಲೆಯಲ್ಲಿ ಸಾಗುವ ಈ ಕಥೆಯಲ್ಲಿ ಭಾವನಾತ್ಮಕ ಸಂಘರ್ಷ, ನೈತಿಕ ಮೌಲ್ಯಗಳು ಹಾಗೂ ತೀವ್ರ ಕಾನೂನು ಹೋರಾಟವನ್ನು ಚಿತ್ರಿಸಲಾಗಿದೆ. ಈ ಚಿತ್ರದ ಮೂಲಕ ಸುಮಾರು 33 ವರ್ಷಗಳ ಬಳಿಕ ಸನ್ನಿ ಡಿಯೋಲ್ ಮತ್ತೊಮ್ಮೆ ವಕೀಲರ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಚಿತ್ರದಲ್ಲಿ ಅಕ್ಷಯ್ ಖನ್ನಾ, ದಿಯಾ ಮಿರ್ಜಾ ಹಾಗೂ ತಿಲೋತ್ತಮಾ ಶೋಮ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದು, ನ್ಯಾಯಾಲಯದ ಸನ್ನಿವೇಶಗಳು ಮತ್ತು ಬಲಿಷ್ಠ ಕಥಾಹಂದರ ಚಿತ್ರದ ವಿಶೇಷ ಆಕರ್ಷಣೆಯಾಗಿದೆ.

'ಇಕ್ಕ' ಚಿತ್ರವು ಈಗ ನೆಟ್‌ಫ್ಲಿಕ್ಸ್‌ನಲ್ಲಿ ಪ್ರಸಾರವಾಗುತ್ತಿದ್ದು, ದೇಶ–ವಿದೇಶಗಳ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯುತ್ತಿದೆ. ಬೆಂಗಳೂರಿನ ವಿಶೇಷ ಪ್ರದರ್ಶನದಲ್ಲಿ ಅಭಿಮಾನಿಗಳಿಂದ ವ್ಯಕ್ತವಾದ ಉತ್ಸಾಹ ಚಿತ್ರಕ್ಕೆ ದೊರೆಯುತ್ತಿರುವ ಜನಪ್ರಿಯತೆಗೆ ಮತ್ತೊಂದು ಸಾಕ್ಷಿಯಾಯಿತು.

# ಈವನ್ ಹಾಸ್ಪಿಟಲ್ಸ್ ವಿಶೇಷ ಅಭಿಯಾನ

ಬೆಂಗಳೂರು




ಮಳೆಗಾಲದಲ್ಲಿ ಹೆಚ್ಚುತ್ತಿರುವ ಜ್ವರ ಹಾಗೂ ಡೆಂಗ್ಯೂ ಪ್ರಕರಣಗಳನ್ನು ಗಮನದಲ್ಲಿಟ್ಟುಕೊಂಡು ಬೆಂಗಳೂರಿನ ಈವನ್ ಹಾಸ್ಪಿಟಲ್ಸ್ ತನ್ನ ಮೊದಲ ವಾರ್ಷಿಕೋತ್ಸವದ ಅಂಗವಾಗಿ ವಿಶೇಷ ಆರೋಗ್ಯ ಅಭಿಯಾನ ಆರಂಭಿಸಿದೆ. ಸಾರ್ವಜನಿಕರಲ್ಲಿ ಶೀಘ್ರ ರೋಗನಿರ್ಣಯಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ರೂ.299ರ ಜ್ವರ□ಡೆಂಗ್ಯೂ ತಪಾಸಣೆ ಪ್ಯಾಕೇಜ್, ಉಚಿತ ಸಮುದಾಯ ಆರೋಗ್ಯ ಶಿಬಿರ ಹಾಗೂ 24 ಗಂಟೆಗಳ ಡೆಂಗ್ಯೂ ಸಹಾಯವಾಣಿ ಸೇವೆಯನ್ನು ಆಸ್ಪತ್ರೆ ಆರಂಭಿಸಿದೆ.

ಜುಲೈ 13ರಿಂದ ಜಾರಿಗೆ ಬಂದಿರುವ ಈ ವಿಶೇಷ ಪ್ಯಾಕೇಜ್ ಮೂಲಕ ಕೇವಲ ರೂ.299ಕ್ಕೆ ಜ್ವರ ಮತ್ತು ಡೆಂಗ್ಯೂ ಸಂಬಂಧಿತ ತಪಾಸಣೆಗಳನ್ನು ಸಾರ್ವಜನಿಕರು ಮಾಡಿಸಿಕೊಳ್ಳಬಹುದಾಗಿದೆ. ಮೊದಲ ವಾರ್ಷಿಕೋತ್ಸವದ ಅಂಗವಾಗಿ ಉಚಿತ ಸಮುದಾಯ ಆರೋಗ್ಯ ಶಿಬಿರವನ್ನೂ ಆಯೋಜಿಸಲಾಗಿದ್ದು, ಮಳೆಗಾಲದ ಸೋಂಕುಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳಿಗೆ ಆದ್ಯತೆ ನೀಡಲಾಗಿದೆ.

ಇದರ ಜೊತೆಗೆ ಆಸ್ಪತ್ರೆ 24/7 ಡೆಂಗ್ಯೂ ಸಹಾಯವಾಣಿ (9187213889) ಯನ್ನು ಆರಂಭಿಸಿದ್ದು, ಜ್ವರ ಅಥವಾ ಡೆಂಗ್ಯೂ ಲಕ್ಷಣಗಳನ್ನು ಅನುಭವಿಸುವವರಿಗೆ ದಿನದ 24 ಗಂಟೆಯೂ ವೈದ್ಯಕೀಯ ಮಾರ್ಗದರ್ಶನ ಲಭ್ಯವಾಗಲಿದೆ. ಸಹಾಯವಾಣಿಗೆ ಕರೆ ಮಾಡುವವರು ಅರ್ಹ ವೈದ್ಯರೊಂದಿಗೆ ನೇರವಾಗಿ ಮಾತನಾಡಿ ತಮ್ಮ ಆರೋಗ್ಯ ಸಮಸ್ಯೆಗಳು, ಅಗತ್ಯ ಪರೀಕ್ಷೆಗಳು ಹಾಗೂ ಚಿಕಿತ್ಸೆ ಕುರಿತು ಸಲಹೆ ಪಡೆಯಬಹುದು. ಇತ್ತೀಚಿನ ವಾರಗಳಲ್ಲಿ ಬೆಂಗಳೂರಿನಲ್ಲಿ ಡೆಂಗ್ಯೂ ಹಾಗೂ ಮಳೆಗಾಲದ ವೈರಲ್ ಜ್ವರ ಪ್ರಕರಣಗಳು ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಈ ಅಭಿಯಾನಕ್ಕೆ ವಿಶೇಷ ಮಹತ್ವ ಬಂದಿದೆ.

# ಕರ್ನಾಟಕದ ಗಣ್ಯರಿಗೆ ಅವಕಾಶ: ಸಿಎಂ ಡಿಕೆಶಿ

ಮುಖಪುಟದಿಂದ



<u>ಭಕ್ತಿಯ ಅಡಿಪಾಯದ ಮೇಲೆ ದೈವ ಕೃಪೆಯ ಗೋಪುರ:</u> "ಭಕ್ತಿಯ ಅಡಿಪಾಯದ ಮೇಲೆ ದೈವ ಕೃಪೆಯ ಗೋಪುರವನ್ನ ಕಟ್ಟಲಿಕ್ಕೆ ನಾವೆಲ್ಲ ಸೇರಿದ್ದೇವೆ. ಧರ್ಮ ಏವ ಹತೋ ಹಂತಿ ಧರ್ಮೋ ರಕ್ಷತಿ ರಕ್ಷಿತಃ/ ತಸ್ಮಾಧರ್ಮೋ ನ ಹಂತವ್ಯೋ ಮಾ ನೋ ಧರ್ಮೋ ಹತೋವಧೀತ್. ಯಾರು ಧರ್ಮವನ್ನ ಕಾಪಾಡುತ್ತಾರೋ ಧರ್ಮವು ಅವರನ್ನ ಕಾಪಾಡುತ್ತದೆ. ಯಾವುದೇ ಜಾತಿಯವರು ಇರಬಹುದು ಹಿಂದೂ, ಕ್ರೈಸ್ತ, ಮುಸಲ್ಮಾನ, ಸಿಖ್, ಜೈನ ಹೀಗೆ ಅವರವರ ಧರ್ಮ, ಪದ್ಧತಿಯನ್ನ ಕಾಪಾಡಿ ಕೊಳ್ಳಬೇಕು. ನಾವಿದನ್ನೆಲ್ಲಾ ಸೃಷ್ಟಿ ಮಾಡಿದ್ದೇವೆ. ದೇವಸ್ಥಾನ ಮಾಡೋದು ಅವರ ಕೆಲಸ ಅಲ್ಲ. ನಿಮ್ಮ ನಮ್ಮೆಲ್ಲರ ಕೆಲಸ. ಇದನ್ನ ಬೆಳೆಸಿ ಉಳಿಸಿ ಕೊಳ್ಳೋಣ" ಎಂದು ಹೇಳಿದರು.

"ಇದು ಭಕ್ತಿಯ ಪೂಜೆ. ಇದು ನಮ್ಮ ಭೂಮಿ ಪೂಜೆ. ಇದು ನಮ್ಮ ನಾಡಿನ ಭಕ್ತಿಯ ಸಂಪ್ರದಾಯದ ಪೂಜೆ" ಎಂದರು.

"ನನಗೆ ಸಿ.ವಿ. ಶಾಸ್ತ್ರೀ ಅವರು ದ್ವಾರಕನಾಥ್ ಅವರನ್ನು ಪರಿಚಯ ಮಾಡಿಕೊಟ್ಟರು. ನನಗೆ ಮೂವತ್ತೈದು ವರ್ಷದಿಂದಲೇ ಮಾರ್ಗದರ್ಶನ ನೀಡುತ್ತಾ ಬಂದವರು. ನನ್ನ ಹಾಗೂ ಅವರ ನಡುವೆ ನಡೆದ ವ್ಯವಹಾರಗಳು, ಚಟುವಟಿಕೆಗಳು, ಅವರು ಕೊಟ್ಟಂತ ಮಾರ್ಗದರ್ಶನ ಹೀಗೆ ಎಲ್ಲಾ ಸನ್ನಿವೇಶಗಳನ್ನು ಹೇಳಿದರೆ ಒಂದು ದೊಡ್ಡ ಚರಿತ್ರೆಯ ಪುಸ್ತಕವನ್ನೇ ಬರೆಯಬಹುದು" ಎಂದರು.

<u>ಧಮ್ಕಿಗಳಿಗೆ ದ್ವಾರಕನಾಥ್ ಅವರು ಹೆದರಿಲ್ಲ:</u> "ದ್ವಾರಕನಾಥ್ ಅವರೂ ಟೀಕೆಗೆ ಒಳಗಾಗಿದ್ದಾರೆ. ಅವರ ಮೇಲೆ ಮಾಧ್ಯಮದವರೂ ದಾಳಿ ಮಾಡಿದ್ದಾರೆ. ಡಿ.ಕೆ. ಶಿವಕುಮಾರ್ ಪರವಾಗಿ ಮಾತನಾಡುತ್ತಿದ್ದೀರಿ ಎಂದು ಕೇಳಿದ್ದಾರೆ. ಇಪ್ಪತ್ತೈದು ವರ್ಷದಿಂದ ಬೇಕಾದಷ್ಟು ಅವರಿಗೆ ಧಮ್ಕಿಗಳನ್ನು ಹಾಕ್ತಿದ್ದಾರೆ. ಆ ಧಮ್ಕಿಗಳಿಗೆ ಅವರು ಯಾವತ್ತೂ ಹೆದರಿಕೊಂಡಿಲ್ಲ. ದೇವರಾಜ ಅರಸು ಅವರು, ಎಸ್.ಎಂ. ಕೃಷ್ಣ ಅವರು, ಧರ್ಮಸಿಂಗ್ ಅವರು ಅನೇಕ ಮುಖ್ಯಮಂತ್ರಿಗಳು ಅವರ ಸಲಹೆ ಪಡೆದಿದ್ದಾರೆ" ಎಂದರು.

"ಮಾಜಿ ಸಂಸದರ ಮಗ ನನ್ನ ಸ್ನೇಹಿತರಾದ ಸುಬ್ರಹ್ಮಣ್ಯ ಅವರ ಪತ್ನಿಗೆ ಕ್ಯಾನ್ಸರ್ ಆಗಿತ್ತು. 1993–94ರ ಕಾಲ ಅಂದು ನಾನು ನನ್ನ ಪತ್ನಿ ಅವರನ್ನು ನೋಡಲು ಹೋಗಿದ್ದೆವು. ಅಂದು ಅಷ್ಟೊಂದು ವೈದ್ಯಕೀಯ ಸವಲತ್ತು ಇರಲಿಲ್ಲ. ಅವರು ಉಳಿಯುವ ಸ್ಥಿತಿಯಲ್ಲೂ ಇರಲಿಲ್ಲ. ನಾನು ಅವರ ಆಪ್ತರಿಂದ ಹೆಣ್ಣು ಮಗಳ ಹಾಗೂ ಮಕ್ಕಳ ಜಾತಕ ತರಲು ಹೇಳಿದೆ. ಅದನ್ನು ಗುರುಗಳಾದ ದ್ವಾರಕನಾಥ್ ಅವರಿಗೆ ನೀಡಿದೆ. ಅವರು ಅದನ್ನು ನೋಡಿ ಈ ಮಕ್ಕಳ ಜಾತಕದಲ್ಲಿ ತಾಯಿಯನ್ನು ಕಳೆದುಕೊಳ್ಳುವುದಿಲ್ಲ ಎಂದಿದೆ ಎಂದರು.

ನಂತರ ಹೊಸದುರ್ಗದ ಬಳಿ ಇರುವ ಆಂಜನೇಯನ ದೇವಸ್ಥಾನಕ್ಕೆ ತೆರಳಿ ಪೂಜೆ ಹೋಮ ಮಾಡಿ ಸಾಕು ಎಂದರು. ಆ ಹೆಣ್ಣು ಮಗಳು ಇನ್ನೂ ಆರೋಗ್ಯವಾಗಿ ಇದ್ದಾರೆ" ಎಂದರು. "ಭಕ್ತಿಯ ಮೂಲಕ ಆಧ್ಯಾತ್ಮದ ದೊಡ್ಡ ಬೀಜವನ್ನ ಬಿತ್ತುವ ಕೆಲಸ ಮಾಡಲಾಗಿದೆ. ನಿಮ್ಮೆಲ್ಲರಿಗೂ ಕೂಡ ಮಂಗಳವಾಗಲಿ, ಶುಭವಾಗಲಿ, ಆರೋಗ್ಯ, ಜ್ಞಾನ, ನೆಮ್ಮದಿ ದೊರೆಯಲಿ. ಭಾರತೀ ತೀರ್ಥ ಮಹಾಸ್ವಾಮಿಗಳು ಹಾಗೂ ವಿಧುಶೇಖರ ಭಾರತೀ ತೀರ್ಥ ಸ್ವಾಮೀಗಳು ನನಗೆ ಆಶೀರ್ವಾದ ಮಾಡಿಕೊಂಡು ಬಂದಿದ್ದಾರೆ. ಈ ಪವಿತ್ರವಾದ ಸ್ಥಳದಲ್ಲಿ ಶಾಂತಿ, ನೆಮ್ಮದಿ ಜನರಿಗೆ ದೊರೆಯಲಿ" ಎಂದರು.

# 'ಸ್ಲೋಹ್ ಬೈ ರೋಚ್, ಕ್ಯೂರಿಯೋ ಕಲೆಕ್ಷನ್ ಬೈ ಹಿಲ್ಟನ್' ಉದ್ಘಾಟನೆ

ಬೆಂಗಳೂರು

ಭಾರತದಲ್ಲಿ ಹಿಲ್ಟನ್‌ನ ಮೊದಲ ಲೈಫ್‌ಸ್ಟೈಲ್ ಹೋಟೆಲ್ 'ಸ್ಲೋಹ್ ಬೈ ರೋಚ್, ಕ್ಯೂರಿಯೋ ಕಲೆಕ್ಷನ್ ಬೈ ಹಿಲ್ಟನ್' ಬೆಂಗಳೂರಿನ ವೈಟ್‌ಫೀಲ್ಡ್‌ನಲ್ಲಿ ಉದ್ಘಾಟನೆಯಾಗಿದೆ. ಇದರೊಂದಿಗೆ 'ಕ್ಯೂರಿಯೋ ಕಲೆಕ್ಷನ್ ಬೈ ಹಿಲ್ಟನ್' ಬ್ರ್ಯಾಂಡ್ ಭಾರತ ಹಾಗೂ ದಕ್ಷಿಣ ಏಷ್ಯಾದಲ್ಲಿ ಮೊದಲ ಬಾರಿಗೆ ಪ್ರವೇಶಿಸಿದೆ.

221 ಕೊಠಡಿಗಳನ್ನು ಹೊಂದಿರುವ ಈ ಹೋಟೆಲ್‌ನ್ನು ಬೆಂಗಳೂರಿನ ಬೂಟಿಕ್ ರಿಯಲ್ ಎಸ್ಟೇಟ್ ಸಂಸ್ಥೆಯಾದ ರೋಚ್ ಲೈಫ್‌ಸ್ಕೇಪ್ಸ್ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗಿದೆ. ಸ್ಥಳೀಯ ಸಂಸ್ಕೃತಿ, ಸಮುದಾಯ ಮತ್ತು ಆಧುನಿಕ ಜೀವನಶೈಲಿಯನ್ನು ಸಂಯೋಜಿಸುವ ವಿನ್ಯಾಸ ಆಧಾರಿತ ಆತಿಥ್ಯ ಅನುಭವವನ್ನು ಈ ಹೋಟೆಲ್ ಒದಗಿಸುತ್ತದೆ.

ಪಶ್ಚಿಮ ಘಟ್ಟಗಳ ಮಲೆನಾಡಿನ ಕಾಫಿ ತೋಟಗಳು ಹಾಗೂ ಸಾಂಪ್ರದಾಯಿಕ ಮನೆಗಳ ಪರಂಪರೆಯಿಂದ ಸ್ಫೂರ್ತಿ ಪಡೆದಿರುವ ಹೋಟೆಲ್‌ನ ವಿನ್ಯಾಸದಲ್ಲಿ ಕಾಫಿ ಬೀಜದ ಜೀವನಚಕ್ರವನ್ನು ಪ್ರತಿಬಿಂಬಿಸುವ ಬಣ್ಣಗಳ ಬಳಕೆ ಮಾಡಲಾಗಿದೆ. ನೈಸರ್ಗಿಕ ವಸ್ತುಗಳು, ಇಳಿಜಾರು ಮೇಲ್ಛಾವಣಿಗಳು ಹಾಗೂ ಕಲಾತ್ಮಕ ಕೆತ್ತನೆಗಳ ಮೂಲಕ ಮಲೆನಾಡಿನ ಮನೆಯ ಆತ್ಮೀಯತೆಯನ್ನು ಅತಿಥಿಗಳಿಗೆ ಅನುಭವಿಸುವಂತೆ ರೂಪಿಸಲಾಗಿದೆ.



ಹೋಟೆಲ್‌ನಲ್ಲಿ ಹಮ್ಮಾಮ್, ತಾಪಮಾನ ನಿಯಂತ್ರಿತ ಈಜುಕೊಳ, ಸಂಪೂರ್ಣ ಸೇವೆಯ ಸ್ಪಾ, ಆರೋಗ್ಯ ಸೌಲಭ್ಯಗಳು ಹಾಗೂ ವಿಶಾಲ ಕಾರ್ಯಕ್ರಮ ಸಭಾಂಗಣಗಳಿದ್ದು, ವಿಶ್ರಾಂತಿ ಮತ್ತು ಸಾಮಾಜಿಕ ಕಾರ್ಯಕ್ರಮಗಳಿಗೆ ಸೂಕ್ತ ವಾತಾವರಣವನ್ನು ಒದಗಿಸುತ್ತದೆ.

ಹಿಲ್ಟನ್‌ನ ದಕ್ಷಿಣ ಏಷ್ಯಾ ವಿಭಾಗದ ಹಿರಿಯ ಉಪಾಧ್ಯಕ್ಷ ಹಾಗೂ ಪ್ರಾದೇಶಿಕ ಮುಖ್ಯಸ್ಥ ಜುಬಿನ್ ಸಕ್ಸೇನಾ ಮಾತನಾಡಿ, ಬೆಂಗಳೂರು ಹಿಲ್ಟನ್‌ನ ಬೆಳವಣಿಗೆಯಲ್ಲಿ ಪ್ರಮುಖ ಮಾರುಕಟ್ಟೆಯಾಗಿದ್ದು, ನಗರದ ಬಲಿಷ್ಠ ವಾಣಿಜ್ಯ ಪರಿಸರ ಮತ್ತು ಪ್ರವಾಸೋದ್ಯಮದ ಹೆಚ್ಚುತ್ತಿರುವ ಬೇಡಿಕೆ ಸಂಸ್ಥೆಯ ವಿಸ್ತರಣೆಗೆ ಪ್ರಮುಖ ಕಾರಣವಾಗಿದೆ ಎಂದು ಹೇಳಿದರು.

ದಕ್ಷಿಣ ಏಷ್ಯಾದಲ್ಲಿ 'ಕ್ಯೂರಿಯೋ ಕಲೆಕ್ಷನ್ ಬೈ ಹಿಲ್ಟನ್'ಗೆ ಚಾಲನೆ ನೀಡುವುದು ಹಾಗೂ ಭಾರತದಲ್ಲಿ ಮೊದಲ ಲೈಫ್‌ಸ್ಟೈಲ್ ಹೋಟೆಲ್ ಆರಂಭಿಸುವುದು ಸಂಸ್ಥೆಯ ಬೆಳವಣಿಗೆಯ ಪಯಣದಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಸ್ಥಳೀಯ ಸಂಸ್ಕೃತಿ, ವೈಶಿಷ್ಟ್ಯತೆ ಮತ್ತು ಜಾಗತಿಕ ಮಟ್ಟದ ಆತಿಥ್ಯ ಸೇವೆಯನ್ನು ಸಂಯೋಜಿಸಿ ಭಾರತೀಯ ಅತಿಥಿಗಳಿಗೆ ವಿಶಿಷ್ಟ ಅನುಭವ ನೀಡುವುದು ಸಂಸ್ಥೆಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

# ಮೊದಲ ತ್ರೈಮಾಸಿಕದಲ್ಲಿ ವೇದಾಂತ ಐರನ್ ಆಂಡ್ ಸ್ಟೀಲ್‌ಗೆ ದಾಖಲೆಯ ಸಾಧನೆ

ಬೆಂಗಳೂರು

ವೇದಾಂತ ಸಮೂಹದ ಪ್ರಮುಖ ಸಂಸ್ಥೆಯಾದ ವೇದಾಂತ ಐರನ್ ಆಂಡ್ ಸ್ಟೀಲ್ ಲಿಮಿಟೆಡ್ (ವಿಐಎಸ್‌ಎಲ್) ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಕಚ್ಚಾ ಕಬ್ಬಿಣ (ಪಿಗ್ ಐರನ್) ಉತ್ಪಾದನೆಯಲ್ಲಿ ಹೊಸ ದಾಖಲೆ ನಿರ್ಮಿಸಿದೆ. ಗೋವಾ ಘಟಕದಲ್ಲಿ ಗಣಿಗಾರಿಕೆ ಮತ್ತು ಸಂಸ್ಕರಣಾ ಚಟುವಟಿಕೆಗಳನ್ನು ಮತ್ತಷ್ಟು ಬಲಪಡಿಸಿದ ಪರಿಣಾಮ, ಕಂಪನಿಯ ಒಟ್ಟಾರೆ ಪಿಗ್ ಐರನ್ ಉತ್ಪಾದನೆ ವಾರ್ಷಿಕ ಆಧಾರದ ಮೇಲೆ ಶೇ.8ರಷ್ಟು ಏರಿಕೆಯಾಗಿ 291 ಕಿಲೋ ಟನ್‌ಗೆ ತಲುಪಿದೆ.

ಸೆಸಾ ಐರನ್ ಓರ್, ಇಎಸ್‌ಎಲ್ ಸ್ಟೀಲ್ ಹಾಗೂ ವೆಸ್ಟರ್ನ್ ಕ್ಲಸ್ಟರ್ ಲಿಮಿಟೆಡ್ ಮೂಲಕ ಕಬ್ಬಿಣದ ಅದಿರು ಗಣಿಗಾರಿಕೆ, ಸಂಸ್ಕರಣೆ ಮತ್ತು ಉಕ್ಕು ಉತ್ಪಾದನಾ ಚಟುವಟಿಕೆಗಳನ್ನು ನಡೆಸುತ್ತಿರುವ ಸಂಸ್ಥೆಯು, ಜೂನ್ 30, 2026ಕ್ಕೆ ಅಂತ್ಯಗೊಂಡ ಮೊದಲ ತ್ರೈಮಾಸಿಕದಲ್ಲಿ ಗಮನಾರ್ಹ ಕಾರ್ಯಾಚರಣಾ ಸಾಧನೆ ದಾಖಲಿಸಿದೆ.

ಕಳೆದ ವರ್ಷದ ಇದೇ ಅವಧಿಯಲ್ಲಿ 269 ಕಿಲೋ ಟನ್ ಇದ್ದ ಪಿಗ್ ಐರನ್ ಉತ್ಪಾದನೆ, ಈ ಬಾರಿ 291 ಕಿಲೋ ಟನ್‌ಗೆ ಏರಿಕೆಯಾಗಿದೆ. ಹಿಂದಿನ ತ್ರೈಮಾಸಿಕಕ್ಕೆ ಹೋಲಿಸಿದರೆ ಇದು ಶೇ.5ರಷ್ಟು ಹೆಚ್ಚಳವಾಗಿದ್ದು, ಕಂಪನಿಯ ಇತಿಹಾಸದಲ್ಲೇ ಅತಿ ಹೆಚ್ಚು ತ್ರೈಮಾಸಿಕ ಉತ್ಪಾದನೆಯಾಗಿದೆ. ಕಾರ್ಯಾಚರಣಾ ದಕ್ಷತೆ, ಉತ್ಪಾದನಾ ಸಾಮರ್ಥ್ಯ ಮತ್ತು ಸಂಪನ್ಮೂಲಗಳ ಪರಿಣಾಮಕಾರಿ ಬಳಕೆಯಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಇದೇ ವೇಳೆ ಗೋವಾ ಗಣಿಗಳಲ್ಲಿ ಕಬ್ಬಿಣದ ಅದಿರು ಉತ್ಪಾದನೆಯಲ್ಲೂ ಗಮನಾರ್ಹ ಏರಿಕೆ ದಾಖಲಾಗಿದೆ. ಮೊದಲ ತ್ರೈಮಾಸಿಕದಲ್ಲಿ ಅದಿರು ಉತ್ಪಾದನೆ ವಾರ್ಷಿಕ ಆಧಾರದ ಮೇಲೆ ಶೇ.166ರಷ್ಟು ಹೆಚ್ಚಳ ಕಂಡು 0.6 ಮಿಲಿಯನ್ ಡಿಎಂಟಿಗೆ ತಲುಪಿದೆ.

